## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಯಚೂರಿನ ಕೃಷಿ ವಿಜ್ಞಾನ ವಿಶ್ವವಿದ್ಯಾಲಯವು ದಿನಾಂಕ:18.11.2014 ರಿಂದ 20.11.2014ರ ವರೆಗೆ ಆಯೋಜಿಸಿರುವ Agriculture Economic Research Association(AERA) ನ ವಾರ್ಷಿಕ ಸಮ್ಮೇಳನಕ್ಕೆ ಆರ್ಥಿಕ ನೆರವನ್ನು ಒದಗಿಸುವ ಬಗ್ಗೆ.

**ಓದಲಾಗಿದೆ:**

1. ಪತ್ರ ಸಂಖ್ಯೆ:VC/UASR/Conference/1305/2-14-15, ದಿನಾಂಕ:10.7.2014 ಉಪಕುಲಪತಿ, ಕೃಷಿ ವಿಜ್ಞಾನ ವಿಶ್ವವಿದ್ಯಾಲಯ, ರಾಯಚೂರು ಇವರ ಪತ್ರ.
2. ರಾಜ್ಯ ಯೋಜನಾ ಮಂಡಳಿಯ ಸದಸ್ಯ ಕಾರ್ಯದರ್ಶಿಯವರ ಪತ್ರ ದಿನಾಂಕ:8.9.2014.

**ಪ್ರಸ್ತಾವನೆ:**

ದಿನಾಂಕ:18.11.2014 ರಿಂದ 20.11.2014ರ ವರೆಗೆ Agriculture Economic Research Association(AERA)ದ 22ನೇ ವಾರ್ಷಿಕ ಸಮ್ಮೇಳನವನ್ನು ಆಯೋಜಿಸಲಾಗಿದೆಯೆಂದು, ಈ ಸಮ್ಮೇಳನವು ಶಿಕ್ಷಣ ತಜ್ಞರು, ಅರ್ಥಶಾಸ್ತ್ರಜ್ಞರು, ನೀತಿ ನಿರೂಪಕರು ಮತ್ತು ಅಭಿವೃದ್ಧಿ ಕೆಲಸಗಾರರ ವೇದಿಕೆಯಾಗಿದೆಯೆಂದು ತಿಳಿಸಿ ಈ ಸಮ್ಮೇಳನಕ್ಕೆ ರೂ.3,50,000/- ಗಳ ಆರ್ಥಿಕ ನೆರವನ್ನು ಒದಗಿಸುವಂತೆ ಮೇಲೆ (1) ರಲ್ಲಿ ಓದಲಾದ ಪತ್ರದಲ್ಲಿ ಉಪಕುಲಪತಿ, ಕೃಷಿ ವಿಜ್ಞಾನ ವಿಶ್ವವಿದ್ಯಾಲಯ, ರಾಯಚೂರು ಇವರು ಕೋರಿರುತ್ತಾರೆ.

ರಾಜ್ಯ ಯೋಜನಾ ಮಂಡಳಿಯ ಮುಖ್ಯ ಸದಸ್ಯ ಕಾರ್ಯದರ್ಶಿಯವರ ಮೇಲೆ ಓದಲಾದ (2)ರ ಪತ್ರದಲ್ಲಿ ರೂ.2.00 ಲಕ್ಷಗಳ ಆರ್ಥಿಕ ನೆರವನ್ನು ಸದರಿ ಸಮ್ಮೇಳನಕ್ಕೆ ಒದಗಿಸಲು ಒಪ್ಪಿಗೆಯನ್ನು ಸೂಚಿಸಿರುತ್ತಾರೆ.

ಅದರಂತೆ, ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಪಿಡಿ 26 ಎಸ್‌ಪಿಬಿ 2014,**
**ಬೆಂಗಳೂರು, ದಿನಾಂಕ:3ನೇ ನವೆಂಬರ್ 2014**

ಮೇಲೆ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ದಿನಾಂಕ:18.11.2014 ರಿಂದ 20.11.2014ರ ವರೆಗೆ ಕೃಷಿ ವಿಜ್ಞಾನ ವಿಶ್ವವಿದ್ಯಾಲಯ, ರಾಯಚೂರು ಇವರು ಆಯೋಜಿಸಿರುವ Agriculture Economic Research Association(AERA) ನ 22ನೇ ವಾರ್ಷಿಕ ಸಮ್ಮೇಳನಕ್ಕೆ ಸಂಬಂಧಿಸಿದ ವೆಚ್ಚದ ವಿವರಗಳು ಮತ್ತು ಉಪಯೋಗಿತ ಪ್ರಮಾಣ ಪತ್ರವನ್ನು ಸಲ್ಲಿಸುವ ಷರತ್ತಿಗೆ ಒಳಪಟ್ಟು ರೂ.2.00 ಲಕ್ಷಗಳ ಅನುದಾನವನ್ನು ರಾಜ್ಯ ಯೋಜನಾ ಮಂಡಳಿಯ ವತಿಯಿಂದ ಸದರಿ ಸಮ್ಮೇಳನಕ್ಕೆ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

ಈ ವೆಚ್ಚವನ್ನು ಯೋಜನಾ ಇಲಾಖೆಯ ಆಯವ್ಯಯ ಲೆಕ್ಕ ಶೀರ್ಷಿಕೆ " 3451-00-101-4-00-59- "ಇತರೆ ವೆಚ್ಚಗಳು" (ಯೋಜನೇತರ) ವೆಚ್ಚದಡಿಯಲ್ಲಿ ಭರಿಸತಕ್ಕದ್ದಾಗಿದೆ.

---2)

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಪಿಡಿ 113 ಎಸ್ ಪಿಎಂ 96 ದಿನಾಂಕ:17.05.1997ರಲ್ಲಿ ರಾಜ್ಯ ಯೋಜನಾ ಮಂಡಳಿಯ ಸದಸ್ಯ ಕಾರ್ಯದರ್ಶಿಯವರಿಗೆ ನೀಡಲಾದ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

( ಎಸ್.ಎಸ್. ಜಯಧರ ),
ಸರ್ಕಾರದ ಅಧೀನ ಕಾರ್ಯದರ್ಶಿ-3,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.
ದೂ:22032623
Planningboard 122@gmail.com

ಇವರಿಗೆ:

1) ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2) ಉಪಕುಲಪತಿ, ಕೃಷಿ ವಿಜ್ಞಾನ ವಿಶ್ವವಿದ್ಯಾಲಯ, ರಾಯಚೂರು.
3) ಸದಸ್ಯ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ.
4) ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಸಹಾಯಕರು, ವಿಕಾಸ ಸೌಧ.
5) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-8).
6) ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
7) ಸಹಾಯಕ ಆಡಳಿತಾಧಿಕಾರಿ, ರಾಜ್ಯ ಯೋಜನಾ ಮಂಡಳಿ.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.